# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 863 (907) |
| ಸದಸ್ಯರ ಹೆಸರು | ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24.08.2026 |
| ಉತ್ತರಿಸುವವರು | ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಳಿವಿನಂಚಿನಲ್ಲಿರುವ ಚಿಂಕಾರ ಪ್ರಭೇದ ಪ್ರಾಣಿಗಳನ್ನು ರಕ್ಷಿಸಲು ಸರ್ಕಾರವು 2015 ರಲ್ಲಿ ಎಡಹಳ್ಳಿ ಚಿಂಕಾರ ರಕ್ಷಿತಾರಣ್ಯ ಎಂದು ಘೋಷಣೆ ಮಾಡಿ ಚಿಂಕಾರ ಪ್ರಾಣಿಗಳ ಸಂರಕ್ಷಿಸಲು ಕೈಗೊಂಡಿರುವ ಕ್ರಮವು ಸರಿಯಷ್ಟೇ; ಆದರೆ ಸದರಿ ಅರಣ್ಯ ಪ್ರದೇಶವು ಬೀಳಗಿ ಹಾಗೂ ಮುಧೋಳ ತಾಲ್ಲೂಕಿನ ವ್ಯಾಪ್ತಿಯನ್ನು ಒಳಗೊಂಡಿದ್ದು, ಪ್ರಾಣಿ ಸಂರಕ್ಷಣೆಯೊಂದಿಗೆ ಸಾರ್ವಜನಿಕರ ಸಮಸ್ಯೆಗಳಿಗೂ ಧ್ವನಿ ಆಗುವಂತೆ ಸರ್ಕಾರ ಮಾರ್ಗಸೂಚಿ ಹೊರಡಿಸಿದ್ದರೂ, ಅಧಿಕಾರಿಗಳ ನಿರ್ಲಕ್ಷತೆಯಿಂದ ರಕ್ಷಿತಾರಣ್ಯದ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಮತ್ತು ರೈತರಿಗೂ ಉಂಟಾಗುತ್ತಿರುವ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಾಗಲಕೋಟೆ ಜಿಲ್ಲೆಯ ಬೀಳಗಿ ಹಾಗೂ ಮುಧೋಳ ತಾಲೂಕಿನ 9636.918 ಹೆ. ಪ್ರದೇಶವನ್ನು ಸರ್ಕಾರದ ಆದೇಶ ಸಂಖ್ಯೆ: FEE 204 FWL 2015, ದಿನಾಂಕ: 23-12-2015 ರಲ್ಲಿ "ಯಡಹಳ್ಳಿ ಚಿಂಕಾರ ವನ್ಯಜೀವಿಧಾಮ" ಎಂದು ವನ್ಯಜೀವಿ (ರಕ್ಷಣಾ) ಕಾಯ್ದೆ, 1972 ರಡಿ ಅಧಿಸೂಚಿಸಲಾಗಿರುತ್ತದೆ.<br><br>ಭಾರತ ಸರ್ಕಾರದ ಪರಿಸರ, ಅರಣ್ಯ ಹಾಗೂ ಹವಾಮಾನ ಬದಲಾವಣೆ ಸಚಿವಾಲಯವು ದಿನಾಂಕ: 19-02-2021 ರ ಅಧಿಸೂಚನೆಯಲ್ಲಿ ಯಡಹಳ್ಳಿ ಚಿಂಕಾರ ವನ್ಯಜೀವಿಧಾಮದ ಸುತ್ತಲಿನ 70.72 ಚ.ಕಿ.ಮೀ. ಪ್ರದೇಶವನ್ನು "ಯಡಹಳ್ಳಿ ಚಿಂಕಾರ ವನ್ಯಜೀವಿಧಾಮದ ಪರಿಸರ ಸೂಕ್ಷ್ಮ ವಲಯ" ಎಂದು ಘೋಷಿಸಿರುತ್ತದೆ.<br><br>ಯಡಹಳ್ಳಿ ಚಿಂಕಾರ ವನ್ಯಜೀವಿಧಾಮದ ವ್ಯಾಪ್ತಿಯಲ್ಲಿ ವನ್ಯಜೀವಿ (ರಕ್ಷಣಾ) ಕಾಯ್ದೆ, 1972 ರನ್ವಯ ಹಾಗೂ ಪರಿಸರ ಸೂಕ್ಷ್ಮ ವಲಯದ ಭಾಗದಲ್ಲಿ ಪರಿಸರ (ರಕ್ಷಣಾ) ಕಾಯ್ದೆ, 1986 ರನ್ವಯ ಕೆಲವು ನಿರ್ಬಂಧಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕಾಗುತ್ತದೆ.<br><br>ವನ್ಯಜೀವಿಧಾಮದ ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯಲ್ಲಿ ಗ್ರಾಮಸ್ಥರಿಗೆ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಯಾವುದೇ ರೀತಿಯ ನಿರ್ಬಂಧವಿರುವುದಿಲ್ಲ. |
| ಆ) | ಬಂದಿದ್ದರೆ, ಪ್ರಾಣಿಗಳ ರಕ್ಷಣೆಯೊಂದಿಗೆ ರೈತರು ಹಾಗು ಸಾರ್ವಜನಿಕರೂ ಎದುರಿಸುತ್ತಿರುವ ಸಮಸ್ಯೆಗಳ ನಿವಾರಣೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು) | ಮಾನವ-ವನ್ಯಜೀವಿ ಸಂಘರ್ಷಣೆಯನ್ನು ನಿಯಂತ್ರಿಸುವ ಉದ್ದೇಶದಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:<br>• ಬೇಸಿಗೆಯಲ್ಲಿ ವನ್ಯಪ್ರಾಣಿಗಳಿಗೆ ನೀರಿನ ಕೊರತೆಯಾಗಿ ಅರಣ್ಯದಂಚಿನ ಗ್ರಾಮಗಳಿಗೆ ಹೋಗದಂತೆ ಲಭ್ಯ ಅನುದಾನದಲ್ಲಿ ಅರಣ್ಯ ಪ್ರದೇಶದಲ್ಲಿ ವಾಟರ್‌ಹೋಲ್/ ಚೆಕ್ ಡ್ಯಾಮ್/ |

| ಕ್ರ.ಸಂ | ಪ್ರಶ್ನೆ | ಉತ್ತರ |
| --- | --- | --- |
| | | ಬೋರವೆಲ್ ನಿರ್ಮಾಣ ಮಾಡಿ ವನ್ಯಪ್ರಾಣಿಗಳಿಗೆ ನೀರಿನ ಸೌಲಭ್ಯ ಒದಗಿಸುವುದು.<br>• ಮಾನವ-ವನ್ಯಪ್ರಾಣಿ ಸಂಘರ್ಷ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಜಾಗೃತಿ ಕಾರ್ಯಕ್ರಮಗಳನ್ನು ಇಲಾಖೆಯಿಂದ ಹಮ್ಮಿಕೊಳ್ಳುವುದು.<br>• ಮಾನವ-ವನ್ಯಪ್ರಾಣಿ ಸಂಘರ್ಷಗಳಿಗೆ ಸಂಬಂಧಿಸಿದಂತೆ ಬೆಳೆ ಹಾನಿ, ಪ್ರಾಣಹಾನಿ ಅಂತಹ ಪ್ರಕರಣಗಳಲ್ಲಿ ಸರ್ಕಾರವು ನಿಗದಿಪಡಿಸಿರುವ ದರಗಳಂತೆ ನಿಯಮಾನುಸಾರ ಪರಿಹಾರ ಪಾವತಿಸುವುದು.<br>• 6 ಕಳ್ಳಬೇಟೆ ತಡೆ ಶಿಬಿರಗಳಲ್ಲಿ ಒಟ್ಟು 18 ಜನ ಸಿಬ್ಬಂದಿಗಳನ್ನು ಹೊರ ಗುತ್ತಿಗೆ ಆಧಾರದ ಮೇಲೆ ನಿಯೋಜಿಸಲಾಗಿದ್ದು, ಸದರಿ ಸಿಬ್ಬಂದಿಗಳು ಮಾನವ-ವನ್ಯಜೀವಿ ಸಂಘರ್ಷ ನಿರ್ವಹಣೆ ಕಾರ್ಯಗಳಲ್ಲೂ ಪಾಲ್ಗೊಳ್ಳುತ್ತಿದ್ದಾರೆ. |

**ಇ-ಸಂಖ್ಯೆ: ಅಪಜೀ 258 ಎಫ್‌ಡಬ್ಲ್ಯೂಎಲ್ 2026**

**(ರಾಮಲಿಂಗಾರೆಡ್ಡಿ)**
ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು